**All India Radio: Bangalore**
**National Bulletin In Kannada**
**32.08.2026 19.35 hrs**
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

ಮುಖ್ಯಾಂಶಗಳು

೧. ಸಂಸತ್ತಿನ ಉಭಯ ಸದನಗಳ ಕಲಾಪ ಅನಿರ್ದಿಷ್ಟಾವಧಿಗೆ ಮುಂದೂಡಿಕೆ; ಲೋಕಸಭೆಯಲ್ಲಿ ಶೇಕಡ ೧೯, ರಾಜ್ಯಸಭೆಯಲ್ಲಿ ಶೇಕಡ ೩೯ ರಷ್ಟು ಉತ್ಪಾದಕತೆ ದಾಖಲು

೨. ತ್ರಿವರ್ಣ ಧ್ವಜ ಹಾರಿಸುವ ಮೂಲಕ 'ಹರ್ ಘರ್ ತಿರಂಗ' ಅಭಿಯಾನದಲ್ಲಿ ಕೇಂದ್ರ ಸಚಿವರು ಭಾಗಿ

೩. ದೆಹಲಿ ಕೆಂಪುಕೋಟೆ ಕಾರು ಬಾಂಬ್ ಸ್ಫೋಟ ಪ್ರಕರಣ; 'ಅಲ್-ಖೈದಾ ಇನ್ ದಿ ಇಂಡಿಯನ್ ಸಬ್‌ಕಾಂಟಿನೆಂಟ್' ಉಗ್ರ ಸಂಘಟನೆಯ ಕೈವಾಡ - ವಿಶ್ವಸಂಸ್ಥೆ ವರದಿ

೪. ಭಾರತದ ಬ್ರಿಕ್ಸ್ ಅಧ್ಯಕ್ಷತೆಗೆ ಚೀನಾ, ರಷ್ಯಾ ಬೆಂಬಲ

---

ಸಂಸತ್ತಿನ ಮಳೆಗಾಲದ ಅಧಿವೇಶನ ಮುಕ್ತಾಯವಾಗಿದ್ದು, ಇಂದು ಎರಡೂ ಸದನಗಳನ್ನು ಅನಿರ್ದಿಷ್ಟಾವಧಿಗೆ ಮುಂದೂಡಲಾಗಿದೆ. ಜುಲೈ ೨೦ ರಂದು ಪ್ರಾರಂಭವಾದ ಅಧಿವೇಶನವು ೨೫ ದಿನಗಳಲ್ಲಿ ಒಟ್ಟು ೧೯ ಕಲಾಪಗಳನ್ನು ಕಂಡಿತು.

ರಾಜ್ಯಸಭಾ ಸಭಾಪತಿ ಸಿ.ಪಿ.ರಾಧಾಕೃಷ್ಣನ್ ಅವರು ಸದನದಲ್ಲಿ ಪದೇ ಪದೆ ಆಗುತ್ತಿರುವ ಅಡಚಣೆಗಳ ಬಗ್ಗೆ ಕಳವಳ ವ್ಯಕ್ತಪಡಿಸಿದರು. ಸದನದ ಸಭಾಂಗಣ ತೆರೆದಿತ್ತು, ಆದರೆ ಸದಸ್ಯರು ಜನರ ಧ್ವನಿ ಎತ್ತಲು ತಮಗೆ ಲಭ್ಯವಿರುವ ಅವಕಾಶಗಳನ್ನು ಸಂಪೂರ್ಣವಾಗಿ ಬಳಸಿಕೊಳ್ಳಲಿಲ್ಲ ಎಂದು ಅವರು ಬೇಸರ ವ್ಯಕ್ತಪಡಿಸಿದರು.

ಆದರೂ, ೧೨ ಮಸೂದೆಗಳನ್ನು ಅಂಗೀಕರಿಸುವ ಮತ್ತು ಹಿಂದಿರುಗಿಸುವ ಮೂಲಕ ಸದನವು ತನ್ನ ಪ್ರಮುಖ ಶಾಸಕಾಂಗ ಕರ್ತವ್ಯಗಳನ್ನು ಪೂರೈಸುವಲ್ಲಿ ಯಶಸ್ವಿಯಾಗಿದೆ. ಸದನವು ಕೇವಲ ೩೭ ಗಂಟೆ ೪೯ ನಿಮಿಷಗಳ ಕಾಲ ಕಾರ್ಯನಿರ್ವಹಿಸಿತು ಎಂದು ರಾಧಾಕೃಷ್ಣನ್ ಮಾಹಿತಿ ನೀಡಿದರು.

ಇದಕ್ಕೂ ಮೊದಲು, ಗಣಿ ಮತ್ತು ಖನಿಜಗಳ ಅಭಿವೃದ್ಧಿ ಮತ್ತು ನಿಯಂತ್ರಣ ತಿದ್ದುಪಡಿ ಮಸೂದೆ-೨೦೨೬ ಅನ್ನು ಸಂಸತ್ತು ಅಂಗೀಕರಿಸಿತು. ರಾಜ್ಯಸಭೆ ಇಂದು ಮಸೂದೆಯನ್ನು ಅನುಮೋದಿಸಿದ್ದು, ಲೋಕಸಭೆ ಈಗಾಗಲೇ ಮಸೂದೆಯನ್ನು ಅಂಗೀಕರಿಸಿದೆ. ೧೯೫೭ ರ ಗಣಿ ಮತ್ತು ಖನಿಜ ಅಭಿವೃದ್ಧಿ ಮತ್ತು ನಿಯಂತ್ರಣ ಕಾಯ್ದೆಗೆ ಮತ್ತಷ್ಟು ತಿದ್ದುಪಡಿ ತರುವ ಮಸೂದೆಯನ್ನು ಕೇಂದ್ರ ಕಲ್ಲಿದ್ದಲು ಮತ್ತು ಗಣಿ ಸಚಿವ ಜಿ.ಕಿಶನ್ ರೆಡ್ಡಿ ಮಂಡಿಸಿದರು.

---

ಸಂಸತ್ತಿನಲ್ಲಿ ಸರ್ಕಾರ ಚರ್ಚೆಗೆ ಸಿದ್ಧವಾಗಿದ್ದಾಗ, ವಿರೋಧ ಪಕ್ಷಗಳು ಚರ್ಚೆಯಿಂದ ದೂರ ಸರಿಯುತ್ತಿವೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಆರೋಪಿಸಿದ್ದಾರೆ. ನವದೆಹಲಿಯಲ್ಲಿಂದು ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ವಿರೋಧ ಪಕ್ಷದ ಸಂಸದರ ನಡವಳಿಕೆ ಪ್ರಜಾಪ್ರಭುತ್ವಕ್ಕೆ, ವಿಶೇಷವಾಗಿ ಸಂಸದೀಯ ಪ್ರಜಾಪ್ರಭುತ್ವಕ್ಕೆ ಒಳ್ಳೆಯದಲ್ಲ ಎಂದು ಹೇಳಿದರು. ಚರ್ಚೆ ಮತ್ತು ಶಾಸಕಾಂಗ ವ್ಯವಹಾರಗಳಿಗೆ ಮಾತ್ರ ಸಂಸತ್ತು ಮೀಸಲಾಗಿದೆ. ಆದರೆ ನಿರಂತರ ಘೋಷಣೆಗಳು ಮತ್ತು ಪ್ರತಿಭಟನೆಗಳು ಮಳೆಗಾಲದ ಅಧಿವೇಶನದಲ್ಲಿ ಸದನದ ಕಾರ್ಯನಿರ್ವಹಣೆಯ ಮೇಲೆ ಪರಿಣಾಮ ಬೀರಿವೆ ಎಂದರು.
ಮಳೆಗಾಲದ ಅಧಿವೇಶನದಲ್ಲಿ ೧೨ ಮಸೂದೆಗಳನ್ನು ಅಂಗೀಕರಿಸಲಾಯಿತು. ಆದರೆ ಅವುಗಳಲ್ಲಿ ಒಂದನ್ನು ಮಾತ್ರ ಎರಡೂ ಸದನಗಳಲ್ಲಿ ಚರ್ಚಿಸಲಾಗಿದೆ. ಈ ಅಧಿವೇಶನದಲ್ಲಿ, ಉತ್ಪಾದಕತೆ ಲೋಕಸಭೆಯಲ್ಲಿ ಶೇಕಡ ೧೯ ಮತ್ತು ರಾಜ್ಯಸಭೆಯಲ್ಲಿ ಶೇಕಡ ೩೯ ರಷ್ಟಿದೆ ಎಂದು ತಿಳಿಸಿದ ಅವರು, ಪದೇ ಪದೆ ಅಡಚಣೆಗಳಿಂದಾಗಿ ಮೊದಲ ಬಾರಿಗೆ ಆಯ್ಕೆಯಾಗಿರುವ ಅನೇಕ ಸಂಸದರು ಸಂಸತ್ತಿನ ಅನುಭವವನ್ನು ಪಡೆಯಲು ಸಾಧ್ಯವಾಗುತ್ತಿಲ್ಲ ಎಂದು ಸಚಿವ ಕಿರಣ್ ರಿಜಿಜು ಕಳವಳ ವ್ಯಕ್ತಪಡಿಸಿದರು.

---

ಕೇಂದ್ರ ಗೃಹ ಸಚಿವ ಅಮಿತ್ ಶಾ, ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜೆ.ಪಿ.ನಡ್ಡಾ, ವಿದೇಶಾಂಗ ಸಚಿವ ಡಾ. ಎಸ್.ಜೈಶಂಕರ್ ಸೇರಿದಂತೆ ಹಲವು ಕೇಂದ್ರ ಸಚಿವರು ಇಂದು ತ್ರಿವರ್ಣ ಧ್ವಜ ಹಾರಿಸುವ ಮೂಲಕ 'ಹರ್ ಘರ್ ತಿರಂಗ' ಅಭಿಯಾನದಲ್ಲಿ ಪಾಲ್ಗೊಂಡರು. ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ನವದೆಹಲಿಯಲ್ಲಿರುವ ತಮ್ಮ ನಿವಾಸದಲ್ಲಿ ತ್ರಿವರ್ಣ ಧ್ವಜ ಹಾರಿಸಿದರು. 'ಹರ್ ಘರ್ ತಿರಂಗ' ಅಭಿಯಾನವು ಪ್ರತಿಯೊಬ್ಬ ಭಾರತೀಯನ ಹೃದಯದಲ್ಲಿ ದೇಶಭಕ್ತಿ ಮತ್ತು ಹೆಮ್ಮೆಯ ಭಾವನೆಗಳನ್ನು ಬಲಪಡಿಸುತ್ತಿದೆ. ಇಂದು ಕೋಟ್ಯಂತರ ನಾಗರಿಕರು 'ಏಕ ಭಾರತ, ಶ್ರೇಷ್ಠ ಭಾರತ' ಎಂಬ ಮನೋಭಾವವನ್ನು ಸಬಲೀಕರಣಗೊಳಿಸುತ್ತಿದ್ದಾರೆ ಎಂದು ಸಾಮಾಜಿಕ ಜಾಲತಾಣದಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ವಿದೇಶಾಂಗ ಸಚಿವ ಡಾ.ಎಸ್. ಜೈಶಂಕರ್ ಅವರು, ಸಾಮಾಜಿಕ ಮಾಧ್ಯಮದಲ್ಲಿ ತ್ರಿವರ್ಣ ಧ್ವಜದೊಂದಿಗೆ ಛಾಯಾಚಿತ್ರವನ್ನು ಹಂಚಿಕೊಂಡಿದ್ದಾರೆ. ನಾಗರಿಕರು ತಮ್ಮ ಮನೆಗಳಲ್ಲಿ ತಿರಂಗ ಹಾರಿಸಿ ಅಭಿಯಾನದಲ್ಲಿ ಪಾಲ್ಗೊಳ್ಳುವಂತೆ ಕೇಂದ್ರ ಕಲ್ಲಿದ್ದಲು ಮತ್ತು ಗಣಿ ಸಚಿವ ಜಿ.ಕಿಶನ್ ರೆಡ್ಡಿ ಮನವಿ ಮಾಡಿದ್ದಾರೆ.

---

೮೦ನೇ ಸ್ವಾತಂತ್ರ್ಯ ದಿನಾಚರಣೆ ಹಿನ್ನೆಲೆಯಲ್ಲಿ ನವದೆಹಲಿಯ ಕೆಂಪುಕೋಟೆಯಲ್ಲಿ ಇಂದು ಪೂರ್ಣ ಪ್ರಮಾಣದ ಪಥಸಂಚಲನಕ್ಕೆ ತಾಲೀಮು ನಡೆಯಿತು. ೧೫೦ ವರ್ಷಗಳ ವಂದೇ ಮಾತರಂ ಸಂಭ್ರಮ ಹಾಗೂ ೨೦೪೭ರ ವಿಕಸಿತ ಭಾರತಕ್ಕಾಗಿ ಯುವ ಶಕ್ತಿ ಎಂಬುದು ಈ ವರ್ಷದ ಘೋಷವಾಕ್ಯವಾಗಿದ್ದು, ಇದನ್ನು ಬಿಂಬಿಸುವ ಶಿಸ್ತು, ನಿಖರತೆ ಮತ್ತು ದೇಶಭಕ್ತಿಯ ಉತ್ಸಾಹಕ್ಕೆ ಸ್ವಾತಂತ್ರ್ಯ ದಿನಾಚರಣೆ ಸಾಕ್ಷಿಯಾಗಲಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

---

ದೆಹಲಿಯ ಕೆಂಪುಕೋಟೆ ಬಳಿ ಕಳೆದ ವರ್ಷ ನವೆಂಬರ್‌ನಲ್ಲಿ ನಡೆದ ಭೀಕರ ಕಾರು ಬಾಂಬ್ ಸ್ಫೋಟದಲ್ಲಿ ೧೧ ಮಂದಿ ಮೃತಪಟ್ಟ ಪ್ರಕರಣದಲ್ಲಿ 'ಅಲ್-ಖೈದಾ ಇನ್ ದಿ ಇಂಡಿಯನ್ ಸಬ್‌ಕಾಂಟಿನೆಂಟ್' ಉಗ್ರ ಸಂಘಟನೆಯ ಕೈವಾಡವಿದೆ ಎಂದು ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ಭಯೋತ್ಪಾದನೆ ಮೇಲ್ವಿಚಾರಣಾ ತಂಡ ತನ್ನ ವರದಿಯಲ್ಲಿ ತಿಳಿಸಿದೆ. 'ಅಲ್-ಖೈದಾ ಇನ್ ದಿ ಇಂಡಿಯನ್ ಸಬ್‌ಕಾಂಟಿನೆಂಟ್' ಸಂಘಟನೆಯು ಸಣ್ಣ ಜಾಲಗಳ ಮೂಲಕ ಕಾರ್ಯನಿರ್ವಹಿಸುತ್ತಿದ್ದು, ದಕ್ಷಿಣ ಏಷ್ಯಾದಲ್ಲಿ ತನ್ನ ಪ್ರಭಾವವನ್ನು ಹೆಚ್ಚಿಸಿಕೊಳ್ಳುತ್ತಿದೆ. ಅಲ್ಲದೆ, ಬಾಂಗ್ಲಾದೇಶದಲ್ಲೂ ನೆಲೆಗಳನ್ನು ಸ್ಥಾಪಿಸಲು ಯತ್ನಿಸುತ್ತಿದ್ದು, ಇದರಿಂದ ದಕ್ಷಿಣ ಏಷ್ಯಾದಲ್ಲಿ ಉಗ್ರರ ಬೆದರಿಕೆ ಹೆಚ್ಚಾಗಿದೆ ಎಂದು ವರದಿಯಲ್ಲಿ ತಿಳಿಸಲಾಗಿದೆ. ಈ ಹಿಂದೆ ಫೆಬ್ರವರಿಯಲ್ಲಿ ಬಂದಿದ್ದ ವರದಿಯು ಈ ದಾಳಿಯಲ್ಲಿ 'ಜೈಶ್-ಎ-ಮೊಹಮ್ಮದ್' ಸಂಘಟನೆಯ ಪಾತ್ರವಿರುವ ಶಂಕೆ ವ್ಯಕ್ತಪಡಿಸಿತ್ತು. ಆದರೆ ಇದೀಗ ಬಂದಿರುವ ನೂತನ ವರದಿಯು ನೇರವಾಗಿ ಎಕ್ಯೂಐಎಸ್ ಸಂಘಟನೆಯನ್ನೇ ಹೊಣೆಗಾರರನ್ನಾಗಿ ಮಾಡಿದೆ.

---

ಈ ವರ್ಷ ಭಾರತದ ಬ್ರಿಕ್ಸ್ ಅಧ್ಯಕ್ಷತೆಗೆ ಚೀನಾ ಮತ್ತು ರಷ್ಯಾ ತಮ್ಮ ಬೆಂಬಲವನ್ನು ಪುನರುಚ್ಚರಿಸಿವೆ. ಭಾರತ, ನಾಲ್ಕನೇ ಬಾರಿಗೆ ಬ್ರಿಕ್ಸ್ ಅಧ್ಯಕ್ಷತೆ ವಹಿಸಿದೆ. ಚೀನಾ ರಾಯಭಾರಿ ಕ್ಸು ಫೀಹಾಂಗ್ ಮತ್ತು ರಷ್ಯಾ ರಾಯಭಾರಿ ಡಿ'ಅಫೇರ್ಸ್ ರೋಮನ್ ಬಾಬುಷ್ಕಿನ್ ಅವರು ಇಂದು ನವದೆಹಲಿಯಲ್ಲಿ ವಿವೇಕಾನಂದ ಇಂಟರ್ನ್ಯಾಷನಲ್ ಫೌಂಡೇಶನ್ ಆಯೋಜಿಸಿದ್ದ ಬ್ರಿಕ್ಸ್ ರಾಯಭಾರಿಗಳ ದುಂಡುಮೇಜಿನ ಚರ್ಚೆಯಲ್ಲಿ ಭಾಗವಹಿಸಿದ್ದರು.

ಜಾಗತಿಕ ವ್ಯವಹಾರಗಳಲ್ಲಿ ಸಹಕಾರವನ್ನು ಗಾಢವಾಗಿಸಲು ಹಾಗೂ ಬ್ರಿಕ್ಸ್‌ನಲ್ಲಿ ಅದರ ಪಾತ್ರವನ್ನು ಬಲಪಡಿಸಲು ಭಾರತ ಮತ್ತು ಇತರ ಬ್ರಿಕ್ಸ್ ಸದಸ್ಯರೊಂದಿಗೆ ಕೆಲಸ ಮಾಡಲು ಚೀನಾ ಸಿದ್ಧವಾಗಿದೆ ಎಂದು ಚೀನಾ ರಾಯಭಾರಿ ಕ್ಸು ಫೀಹಾಂಗ್ ಹೇಳಿದರು. ಪ್ರಾಯೋಗಿಕ ಸಹಕಾರಕ್ಕಾಗಿ ಮತ್ತು ಜಾಗತಿಕ ದಕ್ಷಿಣದ ಹಿತಾಸಕ್ತಿಗಳನ್ನು ಮುನ್ನಡೆಸಲು ಬ್ರಿಕ್ಸ್ ಒಂದು ಪ್ರಮುಖ ವೇದಿಕೆ. ಒಳಗೊಳ್ಳುವಿಕೆ, ಬಹುಪಕ್ಷೀಯತೆ ಮತ್ತು ದಕ್ಷಿಣ-ದಕ್ಷಿಣ ಸಹಕಾರಕ್ಕೆ ಒತ್ತು ನೀಡುವ ಮೂಲಕ ಸ್ಥಿತಿಸ್ಥಾಪಕ ಮತ್ತು ಸುಸ್ಥಿರ ಜಾಗತಿಕ ಕ್ರಮವನ್ನು ನಿರ್ಮಿಸುವಲ್ಲಿ ಬ್ರಿಕ್ಸ್ ಪಾತ್ರದ ಮೇಲೆ ಚರ್ಚೆ ಕೇಂದ್ರೀಕರಿಸಿದೆ ಎಂದು ರಷ್ಯಾ ರಾಯಭಾರಿ ಡಿ'ಅಫೇರ್ಸ್ ರೋಮನ್ ಬಾಬುಷ್ಕಿನ್ ಹೇಳಿದರು.

---

ರಾಷ್ಟ್ರೀಯ ರಕ್ಷಾ ವಿಶ್ವವಿದ್ಯಾಲಯವು ಕೇಂದ್ರ ಕಾರ್ಪೊರೇಟ್ ವ್ಯವಹಾರಗಳ ಸಚಿವಾಲಯದ ಅಡಿಯಲ್ಲಿರುವ 'ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಕಾರ್ಪೊರೇಟ್ ಅಫೇರ್ಸ್' ಸಹಯೋಗದೊಂದಿಗೆ 'ಹಣಕಾಸು ಮತ್ತು ಆರ್ಥಿಕ ಭದ್ರತೆ' ವಿಷಯದಲ್ಲಿ ಎರಡನೇ ಆವೃತ್ತಿಯ ಸ್ನಾತಕೋತ್ತರ ಪದವಿ ಕೋರ್ಸ್‌ಗೆ ಚಾಲನೆ ನೀಡಿದೆ.
ಈ ಕುರಿತು ಮಾಹಿತಿ ನೀಡಿರುವ ವಿಶ್ವವಿದ್ಯಾಲಯದ ಕ್ರಿಮಿನಲ್ ಕಾನೂನು ಮತ್ತು ಮಿಲಿಟರಿ ಕಾನೂನು ವಿಭಾಗದ ನಿರ್ದೇಶಕರಾದ ಸುನೀಲ್ ಕವೀಶ್ವರ್, ಸಂಕೀರ್ಣಗೊಳ್ಳುತ್ತಿರುವ ಅಕ್ರಮ ಹಣ ವರ್ಗಾವಣೆ, ಭಯೋತ್ಪಾದನೆಗೆ ಧನಸಹಾಯ, ಭ್ರಷ್ಟಾಚಾರ ಮತ್ತು ಸೈಬರ್ ಅಪರಾಧಗಳಂತಹ ಆರ್ಥಿಕ ಬೆದರಿಕೆಗಳನ್ನು ತಡೆಯಲು ಸಾಂಪ್ರದಾಯಿಕ ಶಿಕ್ಷಣದಲ್ಲಿ ವಿಶೇಷ ಪಠ್ಯಕ್ರಮಗಳಿರಲಿಲ್ಲ. ಈ ಕೊರತೆಯನ್ನು ನೀಗಿಸಲು ಈ ಹೊಸ ಕೋರ್ಸ್ ರೂಪಿಸಲಾಗಿದೆ ಎಂದು ತಿಳಿಸಿದ್ದಾರೆ.

---

ಶ್ರೀಲಂಕಾ ನೌಕಾಪಡೆ ಇಂದು ೯ ಭಾರತೀಯ ಮೀನುಗಾರರನ್ನು ಬಂಧಿಸಿ, ಅವರ ದೋಣಿಯನ್ನು ವಶಪಡಿಸಿಕೊಂಡಿದೆ. ರಾಮೇಶ್ವರಂನಿಂದ ಮೀನುಗಾರಿಕೆಗೆ ತೆರಳಿದ್ದ ೩೫೦ಕ್ಕೂ ಹೆಚ್ಚು ಮೀನುಗಾರರ ಪೈಕಿ ಒಂದು ದೋಣಿ ಮತ್ತು ೯ ಮಂದಿಯನ್ನು ಬಂಧಿಸಲಾಗಿದೆ. ಅವರನ್ನು ಬಿಡುಗಡೆಗೊಳಿಸಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು, ಕ್ರಮ ಕೈಗೊಳ್ಳಬೇಕು ಎಂದು ಮೀನುಗಾರರ ಸಂಘಟನೆ ಮನವಿ ಮಾಡಿದೆ.

---

ಜಾರ್ಖಂಡ್‌ನಲ್ಲಿ ಜೆಪಿಎಸ್‌ಸಿ-ಜೆಎಸ್‌ಎಸ್‌ಸಿ ಪರೀಕ್ಷಾ ಅಕ್ರಮಗಳ ಆರೋಪದ ಕುರಿತು ವಿದ್ಯಾರ್ಥಿಗಳ ಪ್ರತಿಭಟನೆ ೧೦ನೇ ದಿನವೂ ಮುಂದುವರಿದಿದೆ. ಅಕ್ರಮಗಳ ಕುರಿತು ಸಿಬಿಐ ತನಿಖೆಗೆ ಆಗ್ರಹಿಸಿರುವ ವಿದ್ಯಾರ್ಥಿಗಳು, ಬೇಡಿಕೆ ಈಡೇರದಿದ್ದರೆ ಮುಖ್ಯಮಂತ್ರಿ ನಿವಾಸಕ್ಕೆ ಘೇರಾವ್ ಹಾಕುವುದಾಗಿ ಮತ್ತು ಪ್ರತಿಭಟನೆಯನ್ನು ತೀವ್ರಗೊಳಿಸುವುದಾಗಿ ಎಚ್ಚರಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ನಿವಾಸದ ಸುತ್ತಮುತ್ತ ಪೊಲೀಸರು ಬಿಗಿ ಭದ್ರತೆ ಕೈಗೊಂಡಿದ್ದು, ರಸ್ತೆ ಸಂಚಾರಕ್ಕೆ ನಿರ್ಬಂಧ ವಿಧಿಸಲಾಗಿದೆ. ಮಾಜಿ ಮುಖ್ಯಮಂತ್ರಿ ರಘುವರ್ ದಾಸ್ ವಿದ್ಯಾರ್ಥಿಗಳ ಬೇಡಿಕೆಗಳನ್ನು ಬೆಂಬಲಿಸಿದ್ದು, ಒಂದು ವಾರದೊಳಗೆ ಸಿಬಿಐ ತನಿಖೆಗೆ ಆದೇಶಿಸದಿದ್ದರೆ, ಉಪವಾಸ ಸತ್ಯಾಗ್ರಹ ನಡೆಸುವುದಾಗಿ ತಿಳಿಸಿದ್ದಾರೆ.

---

ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯವು ನವದೆಹಲಿಯಲ್ಲಿ 'ರಕ್ತಹೀನತೆ ಮುಕ್ತ ಭಾರತ' ಅಭಿಯಾನ ಕುರಿತು ಎರಡು ದಿನಗಳ ರಾಷ್ಟ್ರೀಯ ಕಾರ್ಯಾಗಾರವನ್ನು ಆಯೋಜಿಸಿದೆ. ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ೧೭೦ ಕ್ಕೂ ಹೆಚ್ಚು ಪ್ರತಿನಿಧಿಗಳು ಕಾರ್ಯಾಗಾರದಲ್ಲಿ ಭಾಗವಹಿಸಿದ್ದಾರೆ.

---

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ-ಸೆನ್ಸೆಕ್ಸ್ ೧೧೪ ಅಂಕಗಳು ಏರಿಕೆಯಾಗಿದ್ದು, ದಿನದ ಅಂತ್ಯಕ್ಕೆ ೭೮ ಸಾವಿರದ ೮೦ ಅಂಕಗಳು ದಾಖಲಾಗಿದೆ. ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ-ನಿಫ್ಟಿ ४೦ ಅಂಕಗಳು ಇಳಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೪ ಸಾವಿರದ ೩೯೭ ಅಂಕಗಳು ದಾಖಲಾಗಿದೆ.
ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿಂದು ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ ೮೫ ರೂಪಾಯಿ ४४ ಪೈಸೆಯಷ್ಟಾಗಿದೆ.

___________ ಮುಕ್ತಾಯ __________